# ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ

ನೆಲಮಹಡಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಡಾ. ಬಿ.ಆರ್ ಅಂಬೇಡ್ಕರ್ ವೀಧಿ,
ಬೆಂಗಳೂರು–560 001.

**ಸಂಖ್ಯೆ: ನಿಅಚೌಅನಿ/ಪ.ಪ್ರಕಟಣೆ/ಸಿಆರ್–5/2022–23** **ದಿನಾಂಕ: 14.06.2022**

## ಪ್ರಕಟಣೆ

### ಸುವಿಧಾ ತಂತ್ರಾಂಶದ ಮುಖಾಂತರ ಆನ್‌ಲೈನ್ ಅರ್ಜಿ ಸಲ್ಲಿಕೆಗಾಗಿ ಆಹ್ವಾನ

2022–23ನೇ ಸಾಲಿನಲ್ಲಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಈ ಕೆಳಕಂಡ ಯೋಜನೆಗಳಡಿ ಸೌಲಭ್ಯ ಪಡೆಯಬಯಸುವ, ಸರ್ಕಾರಿ ಆದೇಶ ಸಂಖ್ಯೆ ಸಕಇ 225 ಬಿಸಿಎ 2000, ದಿನಾಂಕ 30.03.2002ರ ಆದೇಶದಲ್ಲಿನ ಪ್ರವರ್ಗ–1ರ 6(ಎ) ರಿಂದ 6(ಎಕೆ) ವರೆಗಿನ ಬೆಸ್ತ, ಕೋಳಿ, ಕಬ್ಬಲಿಗ ಇತ್ಯಾದಿ ಜಾತಿ/ಉಪಜಾತಿಗೆ ಸೇರಿದ ಅರ್ಹ ಫಲಾಪೇಕ್ಷಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**1. ಸ್ವಯಂ ಉದ್ಯೋಗ ನೇರ ಸಾಲ ಮತ್ತು ಸಹಾಯಧನ ಯೋಜನೆ**

**2. 2022–23ನೇ ಸಾಲಿನ "ಅರಿವು" ಶೈಕ್ಷಣಿಕ ಸಾಲ (ನವೀಕರಣ) (3 ಮತ್ತು 4ನೇ ಕಂತುಗಳಿಗೆ)**

#### ಸಾಮಾನ್ಯ ಅರ್ಹತೆಗಳು ಮತ್ತು ನಿಬಂಧನೆಗಳು

- ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
- ಕೇಂದ್ರ ಆಧಾರ್ ಅಧಿನಿಯಮ, 2016 ಸೆಕ್ಷನ್ (7) ರಡಿ ಆಧಾರ್ ಕಾರ್ಡ್ ಕಡ್ಡಾಯವಾಗಿರುತ್ತದೆ. ಅರ್ಜಿದಾರರ ಹೆಸರು, ಆಧಾರ್ ಕಾರ್ಡ್, ಜಾತಿ/ಆದಾಯ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಖಾತೆಗಳಲ್ಲಿ ಹೊಂದಾಣಿಕೆ ಆಗಿರಬೇಕು.
- ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯವಾಗಿರುತ್ತದೆ.
- ನಿಗಮದ / ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು.
- ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು.
- ಸರ್ಕಾರ / ನಿಗಮವು ಕಾಲಕಾಲಕ್ಕೆ ವಿಧಿಸುವ ಇನ್ನಿತರ ಅರ್ಹತೆ / ನಿಬಂಧನೆಗಳನ್ನು ಹೊಂದಿದವರಾಗಿರಬೇಕು.

#### ವಿಶೇಷ ಸೂಚನೆ

- ಅನುದಾನದ ಲಭ್ಯತೆಗೆ ಅನುಗುಣವಾಗಿ ಯೋಜನೆಯನ್ನು/ಸೌಲಭ್ಯವನ್ನು ಜಾರಿಗೊಳಿಸಲಾಗುವುದು.
- ಯೋಜನೆಗಳ ಮಾರ್ಗಸೂಚಿಯಲ್ಲಿ ಯಾವುದೇ ಬದಲಾವಣೆಗಳಾದಲ್ಲಿ, ಆ ದಿನಾಂಕದಿಂದ ಜಾರಿಗೆ ಬರುವಂತೆ ಯೋಜನೆಯನ್ನು ಜಾರಿಗೊಳಿಸಲಾಗುವುದು.
- **suvidha.karnataka.gov.in** ತಂತ್ರಾಂಶದ ಮೂಲಕ ಮಾತ್ರವೇ ಅರ್ಜಿಗಳನ್ನು ಸಲ್ಲಿಸಬೇಕು.
- ಹೆಚ್ಚಿನ ಮಾಹಿತಿಯನ್ನು ಸಂಬಂಧಪಟ್ಟ ಜಿಲ್ಲೆಗಳಲ್ಲಿರುವ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿ. / ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯಲ್ಲಿ / ನಿಗಮದ ವೆಬ್‌ಸೈಟ್ **http://ambigaradevelopment.karnataka.gov.in** ರಲ್ಲಿ ಪಡೆಯಬಹುದಾಗಿದೆ.
- ನಿಗಮದ ಸಹಾಯವಾಣಿ (Helpline) ಸಂಖ್ಯೆ 080–22864099 ಗೆ ಬೆಳಿಗ್ಗೆ 10:00 ರಿಂದ ಸಂಜೆ 5:30ರವರೆಗೆ ಸಂಪರ್ಕಿಸಬಹುದಾಗಿದೆ.
- **"ಸುವಿಧಾ" ತಂತ್ರಾಂಶದ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 14.07.2022 ಸಂಜೆ 5.00 ಗಂಟೆ.**

ಸಹಿ/–
(ಡಾ. ಎನ್. ಶ್ರೀಮಾಧವಿ, ಕೆ.ಎಂ.ಎ.ಎಸ್.)
ವ್ಯವಸ್ಥಾಪಕ ನಿರ್ದೇಶಕರು

ವಾಸಾಸಂಇ/ವಾವ್ಯ/ಜಾಹೀರಾತು ಅಪ್ಲೋಡಿಂಗ್*/ /2022–23

ಕೋವಿಡ್–19 – [illegible]

ಮಾಸ್ಕ್ ಧರಿಸಿ | 6 ಅಡಿ ವ್ಯಕ್ತಿಗತ ಅಂತರ ಕಾಪಾಡಿ | ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ